RNU AIR DHARWAD

DECEMBER 31, 2025

AKASHAVANI - DHARWAD

PRADESH SAMACHARA (KANNADA) 12 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ಭಾರತೀಯ ರೇಲ್ವೆ, ಸಕಲೇಶಪುರ–ಸುಬ್ರಹ್ಮಣ್ಯ ಮಧ್ಯೆಯಿರುವ ಘಟ್ಟ ಪ್ರದೇಶದ, ಸುಮಾರು 55 ಕಿಲೋಮೀಟರ್ ವ್ಯಾಪ್ತಿಯಲ್ಲಿ ರೇಲ್ವೆ ವಿದ್ಯುದೀಕರಣವನ್ನು ಯಶಸ್ವಿಯಾಗಿ ಪೂರ್ಣಗೊಳಿಸುವ ಮೂಲಕ ಪ್ರಮುಖ ತಾಂತ್ರಿಕ ಮೈಲುಗಲ್ಲನ್ನು ಸಾಧಿಸಿದೆ ಎಂದು ಕೇಂದ್ರ ರೇಲ್ವೆ ಖಾತೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ. ಮುಂಬರುವ ದಿನಗಳಲ್ಲಿ ಈ ಮಾರ್ಗವಾಗಿ ಬೆಂಗಳೂರು–ಮಂಗಳೂರು ಮಧ್ಯೆ ವಂದೇ ಭಾರತ್ ರೈಲು ಸಂಚಾರ ಆರಂಭವಾಗಲಿದೆ ಎಂದು ಸಚಿವರು ಭರವಸೆ ನೀಡಿದ್ದಾರೆ. ಭಾರತೀಯ ರೇಲ್ವೆ ಜಾಲದಲ್ಲೇ, ಅತ್ಯಂತ ಕ್ಲಿಷ್ಟ ಹಾಗೂ ತಾಂತ್ರಿಕ ಸವಾಲಿನ ಭೂಪ್ರದೇಶದ, ರೇಲ್ವೆ ವಿದ್ಯುದೀಕರಣವು ದೇಶದ ಐಟಿ ರಾಜಧಾನಿ ಹಾಗೂ ಬಂದರು ನಗರದ ಮಧ್ಯೆ ಪ್ರಯಾಣಿಕರ ಸುಗಮ ಸಂಚಾರ ಸೇರಿದಂತೆ, ವ್ಯಾಪಾರ ವಹಿವಾಟಿಗೆ ಸಹಕಾರಿಯಾಗಲಿದೆ ಎಂದು ಬಣ್ಣಿಸಿದ್ದಾರೆ.

<><><>

ಹೊಸ ವರ್ಷದ ಸಂಭ್ರಮಾಚಾರಣೆ ಹಿನ್ನೆಲೆ, ಇಂದು, ಸುರಕ್ಷತೆ ಹಾಗೂ ಜವಾಬ್ದಾರಿಯೊಂದಿಗೆ ಹೊಸ ವರ್ಷ ಆಚರಿಸುವಂತೆ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ಕರೆ ನೀಡಿದ್ದಾರೆ. ಸಾರ್ವಜನಿಕರ ಭದ್ರತೆಯ ಹಿತದೃಷ್ಟಿಯಿಂದ, ಬೆಂಗಳೂರು ನಗರಾದ್ಯಂತ, 20 ಸಾವಿರ ಪೊಲೀಸ್ ಸಿಬ್ಬಂದಿ ನಿಯೋಜನೆಯೊಂದಿಗೆ, ಮಹಿಳೆಯರ ಸುರಕ್ಷತೆಗೆ ಅಗತ್ಯ ಮುನ್ನೆಚ್ಚರಿಕಾ ಕ್ರಮಗಳನ್ನು ಕೈಗೊಳ್ಳಲಾಗಿದೆ. ಜನಸಂದಣಿ ಮೇಲ್ವಿಚಾರಣೆಗಾಗಿ ರಿಯಲ್ ಟೈಮ್ ಹೀಟ್ ಮ್ಯಾಪ್ ತಂತ್ರಜ್ಞಾನದೊಂದಿಗೆ, ಡ್ರೋಣ್ ಹಾಗೂ ಸಿಸಿಟಿವಿ ಕಣ್ಗಾವಲು ಇರಲಿದೆ ಎಂದು ಅವರು ತಿಳಿಸಿದ್ದಾರೆ.

<><><>

ಕಲಬುರಗಿ ಜಿಲ್ಲೆಯಲ್ಲಿ, ಸಾರ್ವಜನಿಕ ಹಿತದೃಷ್ಟಿಯಿಂದ, ಹೊಸ ವ ರ್ಷ ಆಚರಣೆಯ ಸಂದರ್ಭ ಎಲ್ಲ ಆಸ್ಪತ್ರೆಗಳಲ್ಲಿ ಹೆಚ್ಚುವರಿ ಸಿಬ್ಬಂದಿಗಳನ್ನು ನಿಯೋಜಿಸಲಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ತಿಳಿಸಿದ್ದಾರೆ. ಉತ್ತರ ಕನ್ನಡ ಜಿಲ್ಲೆಯಲ್ಲಿ ಹೊಸ ವರ್ಷಾಚರಣೆ ಸಂದರ್ಭ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ವಹಿಸಿ, ಸುರಕ್ಷಿತ ರೀತಿ ಹೊಸ ವರ್ಷ ಆಚರಿಸುವಂತೆ ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯಾ ತಿಳಿಸಿದ್ದಾರೆ. ಇಂದು ಸಂಜೆ 6 ಗಂಟೆಯ ನಂತರ, ಯಾರೂ ಕೂಡಾ ಸಮುದ್ರಕ್ಕೆ ಇಳಿಯಬಾರದು, ರಾತ್ರಿ 12.30 ರ ನಂತರ ಎಲ್ಲ ತರಹದ ಚಟುವಟಿಕೆಗಳನ್ನು ನಿಲ್ಲಿಸುವಂತೆ ಅವರು ನಿರ್ದೇಶಿಸಿದ್ದಾರೆ.

<><><>

2025 ರಲ್ಲಿ ವಿಶ್ವದ ಪ್ರಮುಖ ಇಂಧನ ಉತ್ಪಾದನಾ ರಾಷ್ಟ್ರವಾಗಿ, ಭಾರತ ಹೊರಹೊಮ್ಮಿದೆ. ಮರುಬಳಕೆ ಇಂಧನ ಮೂಲಗಳಾದ ಸೌರ ಹಾಗೂ ಪವನ ವಿದ್ಯುತ್ ಶಕ್ತಿ ಉತ್ಪಾದನೆಯಲ್ಲಿ ದೇಶವು ಮುಂಚೂಣಿಯಲ್ಲಿದೆ. 2030 ರೊಳಗೆ ಶೇಕಡ 50 ರಷ್ಟು ಹಸಿರು ಇಂಧನ ಶಕ್ತಿ ಸಾಮರ್ಥ್ಯ ಹೆಚ್ಚಳದ ಗುರಿ ಹೊಂದಿರುವ, ಭಾರತದ ಉತ್ಪಾದನಾ ಸಾಮರ್ಥ್ಯದ ಬಗ್ಗೆ ಪ್ರದೇಶ ಸಮಾಚಾರಕ್ಕಾಗಿ ಮಾಹಿತಿ ನೀಡಿದ್ದಾರೆ ಇಂಧನ ಮತ್ತು ತಂತ್ರಜ್ಞಾನ ಕ್ಷೇತ್ರದ ತಜ್ಞರಾದ, ಧಾರವಾಡದ ಡಾಕ್ಟರ ಮೃತ್ಯುಂಜಯ ಕಪ್ಪಾಳಿ....

<><><>

ಡಾಕ್ಟರ ಮೃತ್ಯುಂಜಯ ಕಪ್ಪಾಳಿ 39 ಸೆಕೆಂದುಗಳು

<><><>

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು, ಕೇರಳ ಪ್ರವಾಸ ಕೈಗೊಂಡಿದ್ದು, ಇಂದು ವರ್ಕಳ ಶಿವಗಿರಿ ಮಠದಲ್ಲಿ ಆಯೋಜಿತ 93 ನೇ ತೀರ್ಥಾಟನಾ ವರ್ಷಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ, ತಿರುವನಂತಪುರ ತಲುಪಿದ ಮುಖ್ಯಮಂತ್ರಿ ಅವರನ್ನು ಕೇರಳ ಚೆಂಡೆ ವಾದ್ಯಗಳೊಂದಿಗೆ ಸ್ವಾಗತ ಕೋರಲಾಯಿತು. ರಾಷ್ಟ್ರಪಿತ ಮಹಾತ್ಮಾ ಗಾಂಧಿ ಹಾಗೂ ಬ್ರಹ್ಮಶ್ರೀ ನಾರಾಯಣ ಗುರು ಅವರ ಭೇಟಿಯ 100 ನೇ ವರ್ಷಾಚರಣೆ ಸಂದರ್ಭದಲ್ಲಿ ಮುಖ್ಯಮಂತ್ರಿ ಅವರ ಪ್ರವಾಸ ವಿಶೇಷ ಮಹತ್ವ ಪಡೆದಿದೆ.

<><><>

ಇಂದು ಪದ್ಮವಿಭೂಷಣ, ಗಾನಯೋಗಿ ಡಾಕ್ಟರ ಮಲ್ಲಿಕಾರ್ಜುನ್ ಮನ್ಸೂರ್ ಅವರ ಜನ್ಮದಿನ. ಹಿಂದೂಸ್ತಾನಿ ಶಾಸ್ತ್ರೀಯ ಗಾಯಕರಾಗಿದ್ದ ಡಾಕ್ಟರ ಮಲ್ಲಿಕಾರ್ಜುನ್ ಮನ್ಸೂರ ಅವರ ಜನ್ಮದಿನದಂದು, ಅವರ ಸಂಗೀತ ಕ್ಷೇತ್ರದ ಕೊಡುಗೆಗಳನ್ನು ಸ್ಮರಿಸಿರುವ ಗಣ್ಯರು ನಮನಗಳನ್ನು ಸಲ್ಲಿಸಿದ್ದಾರೆ. ಧಾರವಾಡದ ಮನಸೂರ ಗ್ರಾಮದಲ್ಲಿ ಜನಿಸಿದ, ಹಿಂದೂಸ್ತಾನಿ ಗಾಯಕ ಪಂಡಿತ್ ಮಲ್ಲಿಕಾರ್ಜುನ್ ಮನ್ಸೂರ್, ಸಂಗೀತ ಕ್ಷೇತ್ರಕ್ಕೆ ನೀಡಿದ ಕೊಡುಗೆ ಅನನ್ಯ ಹಾಗೂ ಸ್ಮರಣೀಯ ಎಂದು ಕೇಂದ್ರ ಗ್ರಾಹಕ ವ್ಯವಹಾರಗಳ ಖಾತೆ ಸಚಿವರಾದ ಪ್ರಲ್ಹಾದ್ ಜೋಶಿ, ತಮ್ಮ ಎಕ್ಸ್ ಖಾತೆ ಮೂಲಕ ಬಣ್ಣಿಸಿದ್ದಾರೆ.

<><><>

ವಿಜಯನಗರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿತ ರಾಷ್ಟ್ರೀಯ ಗ್ರಾಹಕರ ದಿನಾಚರಣೆ ಹಾಗೂ ಮಾನವ ಹಕ್ಕುಗಳ ದಿನಾಚರಣೆ ಕಾರ್ಯಕ್ರಮವನ್ನು ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಸುಬ್ರಹ್ಮಣ್ಯ ಎನ್. ಉದ್ಘಾಟಿಸಿದರು.

<><><>

ಕರ್ನಾಟಕ ರಾಜ್ಯ ಪ್ರವಾಸದಲ್ಲಿರುವ ಶ್ರೀಲಂಕಾ ಪತ್ರಕರ್ತರ ನಿಯೋಗ, ಬೆಂಗಳೂರು, ಮಾಹಿತಿ ಹಕ್ಕು ಆಯೋಗದ ಕಚೇರಿಗೆ ಭೇಟಿ ನೀಡಿ, ಸಂವಾದ ನಡೆಸಿತು. ಕಳೆದ ಎರಡು ದಶಕಗಳಲ್ಲಿ, ರಾಜ್ಯದಲ್ಲಿ ಮಾಹಿತಿ ಹಕ್ಕು ಆಯೋಗದ ಕಾರ್ಯ ವೈಖರಿ ಬಗ್ಗೆ, ಆಯೋಗದ ಹೆಚ್ಚುವರಿ ಮುಖ್ಯ ಆಯುಕ್ತರಾದ ಕೆ.ರಾಮನ್ ಮಾಹಿತಿ ನೀಡಿದರು. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷ, ಶಿವಾನಂದ ತಗಡೂರು ಅವರು, ರಾಜ್ಯದಲ್ಲಿ ಅನುಷ್ಠಾನಗೊಂಡಿರುವ ಪತ್ರಕರ್ತರ ಬಸ್ ಪಾಸ್, ಮಾಸಾಶನ ಸೇರಿದಂತೆ ಹಲವು ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>